## ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಶೀಲ್ ಜಿ. ನಮೋಶಿರವರ ನಿಯಮ 72ರಡಿ ಗಮನ ಸೆಳೆಯುವ ಸೂಚನೆಗೆ ಉತ್ತರ.

**ಸೂಚನೆ:**

ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಅಲ್ಪಸಂಖ್ಯಾತ ಮತ್ತು ಹಿಂದುಳಿದ ವರ್ಗಗಳ ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ(ಕ.ವ.ಶಿ.ಸ.ಸಂಘ) ಅಧೀನದಲ್ಲಿ ನಿರ್ವಹಣೆ ಮಾಡುತ್ತಿದ್ದರು. ಅದರೆ, ಅಲ್ಪಸಂಖ್ಯಾತ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು 2015 ರಿಂದ ಅಲ್ಪಸಂಖ್ಯಾತ ಇಲಾಖೆಯ ವಸತಿ ಶಾಲೆಗಳನ್ನು ಕ.ವ.ಶಿ.ಸ. ಸಂಘದಿಂದ ಹಿಂಪಡೆದು ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯಿಂದ ನೇರವಾಗಿ ನಿರ್ವಹಣೆ ಮಾಡಲಾಗುತ್ತಿದೆ. ಇದರಿಂದ ಅಲ್ಪಸಂಖ್ಯಾತ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ನಿಗಧಿತ ಸಮಯದೊಳಗೆ ಒದಗಿಸಲಾಗಿದೆ ಮತ್ತು ಶಿಕ್ಷಕರಿಗೆ ನೌಕರರಿಗೆ ಎಲ್ಲಾ ಸರ್ಕಾರಿ ಸೌಲಭ್ಯಗಳನ್ನು ಒದಗಿಸಲಾಗಿದೆ. ಆದ್ದರಿಂದ ಅಲ್ಪಸಂಖ್ಯಾತ ವಸತಿ ಶಾಲೆಗಳ ರೀತಿಯಲ್ಲಿಯೇ ಎಂ.ಡಿ.ಆರ್.ಎಸ್. ಶಾಲೆಗಳಿಗೆ ನಿರ್ದೇಶನಾಲಯ/ಕೆ.ಜಿ.ಐ.ಡಿ ಡಿ.ಸಿ.ಆರ್.ಜಿ ಇನ್ನಿತರೆ ಸೌಲಭ್ಯಗಳನ್ನು ನೀಡಲು ಕ್ರಮ ಕೈಗೊಳ್ಳುವಂತೆ ಮಾನ್ಯ ಸಮಾಜ ಕಲ್ಯಾಣ ಇಲಾಖಾ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:**

ರಾಜ್ಯದಲ್ಲಿ ವಿವಿಧ ವರ್ಗಗಳ ಗ್ರಾಮೀಣ ಪ್ರದೇಶದ ಬಡ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ ಮತ್ತು ಎಲ್ಲಾ ವರ್ಗಗಳ ವಸತಿ ಶಾಲೆಗಳನ್ನು ಒಂದೇ ಸಂಸ್ಥೆಯ ಕಾರ್ಯವ್ಯಾಪ್ತಿಗೆ ಒಳಪಡಿಸುವ ಉದ್ದೇಶದಿಂದ ದಿನಾಂಕ:06.10.1999 ರಲ್ಲಿ ಸರ್ಕಾರವು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ಪ್ರಾರಂಭಿಸಲಾಗಿರುತ್ತದೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ, ಅಲ್ಪಸಂಖ್ಯಾತ ಮತ್ತು ಹಿಂದುಳಿದ ವರ್ಗದ ಒಟ್ಟು 563 ವಸತಿ ಶಾಲೆ/ಕಾಲೇಜುಗಳು ಕಾರ್ಯನಿರ್ವಹಿಸಿದ್ದು, ಈ ಪೈಕಿ 53 ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಹಾಗೂ 5 ಅಲ್ಪಸಂಖ್ಯಾತರ ಪದವಿ ಪೂರ್ವ ವಸತಿ ಕಾಲೇಜುಗಳು ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿದ್ದವು.

ಸರ್ಕಾರದ ಆದೇಶ ಸಂಖ್ಯೆ: MWD 37 MDS 2015 ,ದಿನಾಂಕ: 09.03.2015 ರಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿದ್ದ 53 ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಹಾಗೂ 5 ಅಲ್ಪಸಂಖ್ಯಾತರ ಪದವಿ ಪೂರ್ವ ವಸತಿ ಕಾಲೇಜುಗಳನ್ನು ಸಂಘದಿಂದ ಹಿಂಪಡೆದು ಅಲ್ಪಸಂಖ್ಯಾತರ ನಿರ್ದೇಶನಾಲಯಕ್ಕೆ ಹಸ್ತಾಂತರಿಸಲಾಗಿರುತ್ತದೆ.

ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು/ಕಾಲೇಜುಗಳು ಸರ್ಕಾರದ ಅಲ್ಪಸಂಖ್ಯಾತರ ನಿರ್ದೇಶನಾಲಯಕ್ಕೆ ಹಸ್ತಾಂತರವಾದ್ದರಿಂದ, ಸದರಿ ಅಲ್ಪಸಂಖ್ಯಾತರ ವಸತಿ ಶಾಲೆಗಳಲ್ಲಿ ನೇಮಕಗೊಂಡಿರುವ ಖಾಯಂ ಸಿಬ್ಬಂದಿಗಳಿಗೆ ಸರ್ಕಾರದಿಂದ ದೊರೆಯುತ್ತಿರುವ ಎಲ್ಲಾ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಆದರೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವು ಕರ್ನಾಟಕ ಸಂಘಗಳ ನೊಂದಣಿಗಳ ಅಧಿನಿಯಮ 1960 (1960 ಕರ್ನಾಟಕ ಅಧಿನಿಯಮ 17) ರ 10ನೇ ಪ್ರಕರಣದ (2)ನೇ ಉಪಪ್ರಕರಣದ ಮೇರೆಗೆ ನೋಂದಣಿಯಾದ ಸಂಘ ಸಂಸ್ಥೆಯಾಗಿ ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿದೆ.

ಪ್ರಸ್ತುತ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಡಿ ಪರಿಶಿಷ್ಟ ಜಾತಿ-503, ಪರಿಶಿಷ್ಟ ಪಂಗಡ-144 ಮತ್ತು ಹಿಂದುಳಿದ ವರ್ಗ-174 ಒಟ್ಟಾರೆ 821 ವಸತಿ ಶಾಲೆ/ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದ ವಸತಿ ಶಾಲೆ/ಕಾಲೇಜುಗಳಿಗೆ 19141 ಬೋಧಕ/ಬೋಧಕೇತರ ಮತ್ತು ಗ್ರೂಪ್ "ಡಿ" ವೃಂದದ ಹುದ್ದೆಗಳು ಮಂಜೂರಾಗಿದ್ದು, ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ವಿವರ ಈ ಕೆಳಕಂಡಂತಿದೆ.

| ವೃಂದ | ಮಂಜೂರಾದ ಸಂಖ್ಯೆ | ಖಾಯಂ ಸಿಬ್ಬಂದಿಗಳ ಸಂಖ್ಯೆ | ಅತಿಥಿ ಶಿಕ್ಷಕರು/ ಉಪನ್ಯಾಸಕರ ಸಂಖ್ಯೆ | ಹೊರ ಸಂಪನ್ಮೂಲ ಸಿಬ್ಬಂದಿಗಳ ಸಂಖ್ಯೆ |
|---|---|---|---|---|
| ಬೋಧಕ ಸಿಬ್ಬಂದಿ | 8857 | 5403 | 2602 | 470 |
| ಬೋಧಕೇತರ ಸಿಬ್ಬಂದಿ | 2282 | 1119 | 0 | 841 |
| ಗ್ರೂಪ್ 'ಡಿ' | 8002 | 5 | 0 | 7929 |
| ಒಟ್ಟು | **19141** | **6527** | **2602** | **9240** |

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಖಾಯಂ ಸಿಬ್ಬಂದಿಗಳಿಗೆ ಸಂಘದಿಂದ ನೀಡಲಾಗುತ್ತಿರುವ ಸೌಲಭ್ಯಗಳ ವಿವರ ಈ ಕೆಳಕಂಡಂತಿದೆ.

**<u>ನಿರ್ದೇಶನಾಲಯ:</u>**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ಕರ್ನಾಟಕ ವಸತಿ ಶಿಕ್ಷಣ ನಿರ್ದೇಶನಾಲಯವನ್ನಾಗಿ ಪರಿವರ್ತಿಸುವ ಸಂಬಂಧ 75 ನೇ ಆಡಳಿತ ಮಂಡಳಿ ಸಭೆಯಲ್ಲಿ ವಿಷಯವನ್ನು ಮಂಡಿಸಿದ್ದು, ಆಡಳಿತ ಮಂಡಳಿಯು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ಕರ್ನಾಟಕ ವಸತಿ ಶಿಕ್ಷಣ ನಿರ್ದೇಶನಾಲಯವನ್ನಾಗಿ ಮಾರ್ಪಡಿಸುವ ಬಗ್ಗೆ ಸರ್ಕಾರಕ್ಕೆ ವಿವರವಾದ ಪ್ರಸ್ತಾವನೆ ಸಲ್ಲಿಸುವಂತೆ ತೀರ್ಮಾನಿಸಲಾಯಿತು.

ಅದರಂತೆ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳ ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ/ಡಾ|| ಬಿ.ಆರ್ ಅಂಬೇಡ್ಕರ್/ಶ್ರೀಮತಿ ಇಂದಿರಾ ಗಾಂಧಿ/ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳು/ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ನೌಕರರನ್ನು ನಿರ್ದೇಶನಾಲಯದ

ವ್ಯಾಪ್ತಿಗೆ ಒಳಪಡಿಸಿ, ಜವಾಹರ್ ನವೋದಯ ವಿದ್ಯಾಲಯ ಮಾದರಿಯಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ಕರ್ನಾಟಕ ವಸತಿ ಶಿಕ್ಷಣ ನಿರ್ದೇಶನಾಲಯವನ್ನಾಗಿ ಮಾರ್ಪಡಿಸುವ ಕುರಿತು ಆರ್ಥಿಕ ಇಲಾಖೆಯ ಅಭಿಪ್ರಾಯ/ಸಹಮತಿ ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಆರ್ಥಿಕ ಇಲಾಖೆಯಿಂದ ಯಾವುದೇ ಅಭಿಪ್ರಾಯ ಸ್ವೀಕೃತವಾಗದ ಹಿನ್ನೆಲೆಯಲ್ಲಿ ಮತ್ತೊಮ್ಮೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಪ್ರಸ್ತುತ ಸನ್ಮಾನ್ಯ ಮುಖ್ಯಮಂತ್ರಿಯವರ ಹಾಗೂ ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.

**ಕೆ.ಜಿ.ಐ.ಡಿ.**

ಸರ್ಕಾರಿ ನೌಕರರಿಗೆ ನೀಡಲಾಗುವ ಕೆ.ಜಿ.ಐ.ಡಿ. ಸೌಲಭ್ಯವನ್ನು ವಿಸ್ತರಿಸುವ ಬಗ್ಗೆ ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ ನೌಕರರು ಖಾಯಂ ರಾಜ್ಯ ಸರ್ಕಾರಿ ನೌಕರರಿಗಾಗಿ ರೂಪಿಸಲಾಗಿರುವ ಕಡ್ಡಾಯ ಜೀವ ವಿಮಾ ನಿಯಮಗಳ ವ್ಯಾಪ್ತಿಗೆ ಒಳಪಡಿಸಲು ಅವಕಾಶವಿರುವುದಿಲ್ಲವೆಂದು ಆರ್ಥಿಕ ಇಲಾಖೆಯು ತಿರಸ್ಕರಿಸಿ ಹಿಂಬರಹ ನೀಡಿರುತ್ತದೆ.

**ಜ್ಯೋತಿ ಸಂಜೀವಿನಿ**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆ/ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಖಾಯಂ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ಜ್ಯೋತಿ ಸಂಜೀವಿನಿ ಯೋಜನೆ ಹಾಗೂ ನಗದು ರಹಿತ ಸೌಲಭ್ಯಗಳನ್ನು ನೀಡುವ ಸಂಬಂಧ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರವರಿಗೆ ಸಂಘದಿಂದ ಪತ್ರ ವ್ಯವಹರಿಸಲಾಗಿದ್ದು, ಸದರಿಯವರು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ರವರ ಅಭಿಪ್ರಾಯ ಕೋರಲಾಗಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಇವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮುಖಾಂತರ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರವರೊಂದಿಗೆ ಸಮಾಲೋಚಿಸಿ ಸದರಿ ಸೌಲಭ್ಯವನ್ನು ವಿಸ್ತರಿಸುವ ಸಂಬಂಧ ಅಗತ್ಯ ಕ್ರಮವಹಿಸುವಂತೆ ಸೂಚಿಸಿರುತ್ತಾರೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಖಾಯಂ ನೌಕರರು ಹಾಗೂ ಅವಲಂಬಿತ ಕುಟುಂಬದ ಸದಸ್ಯರುಗಳಿಗೆ ನಗದು ರಹಿತ ವೈದ್ಯಕೀಯ ಚಿಕಿತ್ಸೆ ಒದಗಿಸುವ ಬಗ್ಗೆ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಇವರು ನೀಡಿರುವ ತಾತ್ವಿಕ ಒಪ್ಪಿಗೆಯಂತೆ ಹಾಗೂ ಸಂಘದ 78ನೇ ಆಡಳಿತ ಮಂಡಳಿ ಸಭೆಯ ತೀರ್ಮಾನದಂತೆ ರೂ.4.5 ಕೋಟಿಗಳನ್ನು ಸಂಘಕ್ಕೆ ಒದಗಿಸುವ ನಿರ್ವಹಣಾ ವೆಚ್ಚದಿಂದ ಭರಿಸಲು ಅನುಮತಿ ನೀಡಲಾಗಿರುತ್ತದೆ. ಅದರಂತೆ ಯೋಜನೆಯನ್ನು ವಿಸ್ತರಿಸುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.

**ಡಿ.ಸಿ.ಆರ್.ಜಿ**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ದಿನಾಂಕ:01.04.2018 ರಿಂದ (DCRG) ಕುಟುಂಬ ಪಿಂಚಣಿ ಯೋಜನೆಯ ಸೌಲಭ್ಯವನ್ನು ವಿಸ್ತರಿಸಲು ಪತ್ರ ಸಂಖ್ಯೆ:ಸಕಇ 498 ಮೊದೇಶಾ 2018, ದಿನಾಂಕ:24.11.2018 ರಲ್ಲಿ ನೂತನ ಪಿಂಚಣಿ ಯೋಜನೆಯಡಿ ಬರುವ ಸರ್ಕಾರಿ ನೌಕರರಿಗೆ ಮಾತ್ರ ಎಂದು ಸ್ಪಷ್ಟವಾಗಿ ತಿಳಿಸಿರುವುದರಿಂದ ಈ ಸೌಲಭ್ಯವು ಸರ್ಕಾರದ ನಿಗಮ ಮಂಡಳಿಗಳು, ಸ್ವಾಯತ್ತ ಸಂಸ್ಥೆಗಳು ಹಾಗೂ ಸರ್ಕಾರದ ಅಧೀನದ ಇನ್ನಿತರ ಯಾವುದೇ ಸಂಘ ಸಂಸ್ಥೆಗಳ ನೌಕರರಿಗೆ ಅನ್ವಯಿಸುವುದಿಲ್ಲ. ಆದ್ದರಿಂದ, ಸಂಘದ ನೌಕರರಿಗೆ ಈ ಸೌಲಭ್ಯವನ್ನು ವಿಸ್ತರಿಸಲು ಸಾಧ್ಯವಿಲ್ಲವೆಂದು ನಿರ್ದೇಶಿಸಲಾಗಿದೆ.

ಆದಾಗ್ಯೂ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಯ ಶಿಕ್ಷಕರಿಗೆ ಇತರೆ ಎಲ್ಲಾ ಸರ್ಕಾರಿ ನೌಕರರುಗಳಿಗೆ ಅನ್ವಯವಾಗುವಂತೆ, ದಿನಾಂಕ:01.04.2018 ರಿಂದ DCRG ಕುಟುಂಬ ಪಿಂಚಣಿ ಯೋಜನೆಯ ಸೌಲಭ್ಯವನ್ನು ವಿಸ್ತರಿಸುವಂತೆ ಕೋರಿ ಸಲ್ಲಿಸಿರುವ ಪ್ರಸ್ತಾವನೆಯು ಪ್ರಸ್ತುತ ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.

ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ:ಸಕಇ-ಎಂಡಿಎಸ್/180/2023, ದಿನಾಂಕ:04.11.2023 ರಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ನೌಕರರಿಗೆ DCRG ಸೌಲಭ್ಯ ಮಂಜೂರಾಗುವವರೆಗೆ ಸಂಘದ ಅಧೀನದ ಸೇವಾ ನಿರತ ಖಾಯಂ ಸಿಬ್ಬಂದಿಗಳು ಅಕಾಲಿಕ ಮರಣ ಹೊಂದಿದಲ್ಲಿ, ಅಂತಹ ಸಿಬ್ಬಂದಿಗಳ ಅವಲಂಬಿತ ಕುಟುಂಬದವರಿಗೆ ರೂ.5.00 ಲಕ್ಷಗಳ ಪರಿಹಾರ ಧನವನ್ನು ಪಾವತಿಸಲು ಆದೇಶ ಹೊರಡಿಸಲಾಗಿರುತ್ತದೆ. ಅದರಂತೆ ಕ್ರಮವಹಿಲಾಗುತ್ತಿದೆ.

ಮುಂದುವರೆದು, ಸಂಘದ ವ್ಯಾಪ್ತಿಯ ಭೋಧಕ-ಭೋಧಕೇತರ ಖಾಯಂ ನೌಕರರುಗಳಿಗೆ ಇತರೆ ಸರ್ಕಾರಿ ನೌಕರರುಗಳಿಗೆ ನೀಡುತ್ತಿರುವಂತೆ ವೈದ್ಯಕೀಯ ವೆಚ್ಚ ಮರುಪಾವತಿ, ಕಾಲಕಾಲಕ್ಕೆ ಸರ್ಕಾರದಿಂದ ನಿಗಧಿಪಡಿಸಿದ ವೇತನ ಶ್ರೇಣಿಯಂತೆ ವೇತನ ಬಡ್ತಿ ಹಾಗೂ ವೇತನ ಶ್ರೇಣಿ, ಗಳಿಕೆ ರಜೆ ನಗದೀಕರಣ ಸೌಲಭ್ಯ, ಮೃತಪಟ್ಟ ಖಾಯಂ ನೌಕರರ ಕುಟುಂಬದ ಸದ್ಯಸ್ಯರಿಗೆ ಅನುಕಂಪ ಆಧಾರದ ಮೇಲೆ ನಿಯಮಾನುಸಾರ ನೌಕರಿ ಹಾಗೂ ಇತ್ಯಾದಿ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿರುತ್ತದೆ.

**ಸಕಇ 334 ಎಂಡಿಎಸ್ 2024**

**(ಡಾ.ಹೆಚ್.ಸಿ. ಮಹದೇವಪ್ಪ)**
ಸಮಾಜ ಕಲ್ಯಾಣ ಸಚಿವರು